# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2021-22ನೇ ಸಾಲಿಗೆ ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಗಳಡಿಯಲ್ಲಿ ಬಿಡುಗಡೆಯಾಗಿರುವ ಅನುದಾನವನ್ನು ಬ್ಯಾಂಕ್ ಖಾತೆಗೆ ಜಮೆ ಮಾಡಿ ನಂತರ ಕಾರ್ಯಕ್ರಮ ಅನುಷ್ಠಾನಗೊಳಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ:- ಪ್ರಸ್ತಾವನೆ ಸಂಖ್ಯೆ: ಹಿಂವಕಇ/ವಿವೇ/ಸಿಆರ್-28/2021-22, ದಿನಾಂಕ:07.01.2022.

****

**ಪ್ರಸ್ತಾವನೆ:-**

ಮೇಲೆ ಓದಲಾದ ಆಯುಕ್ತರ ಪ್ರಸ್ತಾವನೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮೆಟ್ರಿಕ್-ನಂತರದ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಶೈಕ್ಷಣಿಕವಾಗಿ ಉತ್ತೇಜಿಸುವ ದೃಷ್ಠಿಯಿಂದ ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ, ಶುಲ್ಕ ವಿನಾಯಿತಿ ಹಾಗೂ ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, 2021-22 ನೇ ಸಾಲಿನ ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಗಳಿಗೆ ದಿನಾಂಕ:31.01.2022 ರವರೆಗೆ ಅರ್ಜಿ ಸಲ್ಲಿಸಲು ಅವಕಾಶವನ್ನು ಕಲ್ಪಿಸಲಾಗಿರುತ್ತದೆ. 2021-22 ನೇ ಸಾಲಿನ ವೈದ್ಯಕೀಯ ಕೋರ್ಸಿನ ಪ್ರಥಮ ವರ್ಷದ ತರಗತಿಗಳು ಪ್ರಾರಂಭವಾಗದಿರುವ ಕಾರಣ ಸದರಿ ವಿದ್ಯಾರ್ಥಿಗಳಿಗೆ ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸಬೇಕಾಗಿರುತ್ತದೆ.

ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ/30/ಬಿಸಿಇ/2021, ದಿನಾಂಕ:28.12.2021 ರನ್ವಯ ದಿನಾಂಕ:31.12.2021 ರವರೆಗೆ ಬಿಡುಗಡೆಯಾಗಿರುವ ಅನುದಾನವನ್ನು ದಿನಾಂಕ:15.02.2022 ರೊಳಗೆ ವೆಚ್ಚ ಮಾಡಬೇಕಾಗಿದ್ದು, ಫೆಬ್ರವರಿ 2022 ರ ಮಾಹೆಯಿಂದ ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಿದ್ದಲ್ಲಿ ಆರ್ಥಿಕ ಇಲಾಖೆಯು ನಿಗಧಿಪಡಿಸಿರುವ ದಿನಾಂಕದೊಳಗೆ ಜಿಲ್ಲಾ ವಲಯದಲ್ಲಿ ಶುಲ್ಕ ವಿನಾಯಿತಿ ಯೋಜನೆಗೆ ಬಿಡುಗಡೆ ಮಾಡಿರುವ ಅನುದಾನವನ್ನು ವೆಚ್ಚ ಮಾಡಲು ಕಷ್ಟಸಾಧ್ಯವಾಗುತ್ತದೆ. ಆದ್ದರಿಂದ 2021-22 ನೇ ಸಾಲಿಗೆ ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಆಯುಕ್ತರ ಹೆಸರಿನಲ್ಲಿ ಉಳಿತಾಯ ಖಾತೆಯನ್ನು ತೆರೆದು ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಗಳಿಗೆ ಈ ಕೆಳಕಂಡಂತೆ ಆಯವ್ಯಯದಲ್ಲಿ ಒದಗಿಸಿದ ಒಟ್ಟು ಅನುದಾನವನ್ನು ಬ್ಯಾಂಕ್ ಖಾತೆಗೆ ಜಮೆ ಮಾಡಿ ಮಂಜೂರು ಮಾಡಲು ಅನುಮತಿ/ಆದೇಶ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

| ಕ್ರ. ಸಂ | ಕಾರ್ಯಕ್ರಮದ ಹೆಸರು ಮತ್ತು ಲೆಕ್ಕಶೀರ್ಷಿಕೆ | ಆಯವ್ಯಯದಲ್ಲಿ ಒದಗಿಸಿದ ಅನುದಾನ |
|---|---|---|
| 1. | ಕೇಂದ್ರ ಪುರಸ್ಕೃತ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮ 2225-03-277-2-51(117) | 49.53 |
| 2. | ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆ 2225-03-283-0-03 (059) | 150.00 |
| 3. | ಶುಲ್ಕ ವಿನಾಯಿತಿ ಯೋಜನೆ 2225-00-103-0-28 (090) | 400.00 |
| 4. | ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮ (NT/SNT) 2225-03-102-0-12 (117) | 7.00 |
| | **ಒಟ್ಟು** | 606.53 |

ಈ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 28 ಬಿಎಂಎಸ್ 2022,**
**ಬೆಂಗಳೂರು, ದಿನಾಂಕ: 07.02.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2021-22 ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಈ ಕೆಳಕಂಡಂತೆ ಆಯವ್ಯಯದಲ್ಲಿ ಒದಗಿಸಿದ ಒಟ್ಟು ಅನುದಾನವನ್ನುಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಹೆಸರಿನಲ್ಲಿ ನಿಯಮಾನುಸಾರ ತೆರೆಯುವ ಹೊಸ ಬ್ಯಾಂಕ್ ಉಳಿತಾಯ ಖಾತೆಗೆ ಜಮಾ ಮಾಡಿ, ನಂತರ ಸದರಿ ಅನುದಾನವನ್ನು ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ (ಎಸ್.ಎಸ್.ಪಿ) ಮುಖಾಂತರ ಕರೆಯಲಾಗಿರುವ ಈ ಕೆಳಕಂಡ ಯೋಜನೆಗಳ ಅರ್ಜಿಗಳ ಅರ್ಹತೆಯಂತೆ ವಿದ್ಯಾರ್ಥಿಗಳಿಗೆ ನಿಯಮಾನುಸಾರ ನೇರವಾಗಿ ಅವರ ಆಧಾರ ಜೋಡಣೆಯಾಗಿರುವ ಬ್ಯಾಂಕ್ ಖಾತೆಗೆ ಡಿಬಿಟಿ ಮೂಲಕ ಪಾವತಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಿ ಆದೇಶಿಸಿದೆ.

| ಕ್ರ. ಸಂ | ಕಾರ್ಯಕ್ರಮದ ಹೆಸರು ಮತ್ತು ಲೆಕ್ಕಶೀರ್ಷಿಕೆ | ಆಯವ್ಯಯದಲ್ಲಿ ಒದಗಿಸಿದ ಅನುದಾನ |
|---|---|---|
| 1 | ಕೇಂದ್ರ ಪುರಸ್ಕೃತ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮ 2225-03-277-2-51(117) | 49.53 |
| 2 | ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆ 2225-03-283-0-03 (059) | 150.00 * |
| 3 | ಶುಲ್ಕ ವಿನಾಯಿತಿ ಯೋಜನೆ 2225-00-103-0-28 (090) | 400.00 |
| 4 | ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮ (NT/SNT) 2225-03-102-0-12 (117) | 7.00 |
| | **ಒಟ್ಟು** | **606.53** |

* ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 466 ಬಿಎಂಎಸ್ 2021, ದಿನಾಂಕ:-21.01.2022 ರಲ್ಲಿ ರೂ. 10.50 ಕೋಟಿಗಳನ್ನು ಅಮೃತ ಸ್ಟಾರ್ಟ್ ಅಪ್ ಯೋಜನೆಯನ್ನು ಅನುಷ್ಠಾನಗೊಳಿಸಲು ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಗೆ ನಿಯಮಾನುಸಾರ ವರ್ಗಾಯಿಸಿ ಬಿಡುಗಡೆ ಮಾಡುವಂತೆ ಆದೇಶಿಸಲಾಗಿರುತ್ತದೆ.

**ಷರತ್ತುಗಳು:**

1. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಈ ರೀತಿ ಬ್ಯಾಂಕ್ ಖಾತೆಯಲ್ಲಿ ಜಮಾ ಮಾಡಿದ ಅನುದಾನವನ್ನು ಅರ್ಜಿಗಳ ಪ್ರಕ್ರಿಯೆ ಕರೆದು ಮುಗಿದ ನಂತರ ನಿಯಮಾನುಸಾರ ಬಳಸಿಕೊಳ್ಳಲು ಮತ್ತು ಈ ಅರ್ಜಿಗಳನ್ನು ಅಹ್ವಾನಿಸಿದ ಕೊನೆಯ ದಿನಾಂಕದಿಂದ 03 ತಿಂಗಳೊಳಗೆ ನಿಯಮಾನುಸಾರ ಬಳಸಿಕೊಳ್ಳತಕ್ಕದ್ದು ಹಾಗೂ ಬಾಕಿ ಉಳಿದ ಮೊತ್ತವನ್ನು ನಿಯಮಾನುಸಾರ ರಾಜ್ಯದ ಏಕೀಕೃತ ನಿಧಿಗೆ ಜಮಾ ಮಾಡಬೇಕು. ಬಳಸಿಕೊಂಡ ಅನುದಾನವನ್ನು ಆಡಿಟ್ ಮಾಡಿಸಿ ಸರ್ಕಾರಕ್ಕೆ ವರದಿ ಸಲ್ಲಿಸುವುದು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಮೆಟ್ರಿಕ್-ನಂತರದ ಎಲ್ಲಾ ಕಾರ್ಯಕ್ರಮಗಳಡಿ ಕೆ-2 ಮತ್ತು ಡಿಬಿಟಿ ಮಾರ್ಗಸೂಚಿಗಳ ಪ್ರಕಾರ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಪಾವತಿಸುವುದನ್ನು ಖಚಿತ ಪಡಿಸಿಕೊಳ್ಳುವುದು.